# ಕುವೆಂಪು ವಿಶ್ವವಿದ್ಯಾಲಯ

ಕುಲಸಚಿವ(ಪರೀಕ್ಷಾಂಗ)ರವರ ಕಛೇರಿ.

ಜ್ಞಾನಸಹ್ಯಾದ್ರಿ, ಶಂಕರಘಟ್ಟ–577451, ಶಿವಮೊಗ್ಗ, ಕರ್ನಾಟಕ.

Phone No: 08282–256166, mob: 7022254993 ಇ–ಮೇಲ್: regexamku@gmail.com, ವೆಬ್‌ಸೈಟ್: www.kuvempu.ac.in

**Re-Accredited by NAAC with 'A' Grade, Ranked 73rd Place in NIRF– 2019 and Secured 45th Place in SCIMAGO Institutional Rankings**

ಸಂಖ್ಯೆ: ಕುವಿ/ಪವಿ/ಪಿಸಿ/ 3687 /2022–23 ದಿನಾಂಕ:26–07–2022

## ಪರೀಕ್ಷಾ ಪ್ರಕಟಣೆ

ವಿಷಯ: ಆಗಸ್ಟ್–2022ರಲ್ಲಿ ನಡೆಯಲಿರುವ ಬಿ.ಇಡಿ, ಪ್ರಥಮ ವರ್ಷದ ಪರೀಕ್ಷೆಗೆ ಸಂಬಂಧಿಸಿದಂತೆ ವಿದ್ಯಾರ್ಥಿಗಳು **UUCMS** ತಂತ್ರಾಂಶದ ಮೂಲಕ ಆನ್‌ಲೈನ್‌ನಲ್ಲಿ ಪರೀಕ್ಷಾ ಅರ್ಜಿ ಸಲ್ಲಿಸುವ ಹಾಗೂ ಶುಲ್ಕ ಪಾವತಿಸುವ ಕುರಿತು.

ಉಲ್ಲೇಖ: 1. ಸುತ್ತೋಲೆ ಸಂಖ್ಯೆ: ಕುವಿ/ ಪವಿ/2294/2022–23. ದಿನಾಂಕ: 02–07–2022.
2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 22–07–2022

*****

ಪ್ರಸಕ್ತ ಸಾಲಿನಲ್ಲಿ ಪ್ರವೇಶಪಡೆದಿರುವ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಪರೀಕ್ಷಾ ಶುಲ್ಕ ಪಾವತಿಸುವ ಸಂಬಂಧ ಉಲ್ಲೇಖಿತ ಸುತ್ತೋಲೆಯಲ್ಲಿ ಪ್ರತ್ಯೇಕವಾಗಿ ಪರೀಕ್ಷಾ ಪ್ರಕಟಣೆ ಹೊರಡಿಸುವುದಾಗಿ ತಿಳಿಯಪಡಿಸಲಾಗಿತ್ತು. ಆದರಂತೆ, ಪ್ರಸ್ತುತ **ಬಿ.ಇಡಿ,** ಪದವಿ ಪ್ರಥಮ ಸೆಮಿಸ್ಟರ್‌ನ ಪರೀಕ್ಷೆಗಳು **ಆಗಸ್ಟ್ ಮಾಹೆಯಲ್ಲಿ ನಡೆಯಲಿದೆ.**

ಪರೀಕ್ಷೆ ತೆಗೆದುಕೊಳ್ಳಲು ನಿಯಮಾನುಸಾರ ಅರ್ಹರಾದ ಅಭ್ಯರ್ಥಿಗಳು **UUCMS ತಂತ್ರಾಂಶದ ಮೂಲಕ ಆನ್‌ಲೈನ್‌ನಲ್ಲಿ** ತಮ್ಮ ಅರ್ಜಿ/ ಪರೀಕ್ಷಾ ಶುಲ್ಕವನ್ನು ಪಾವತಿಸಿ ನಂತರ ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರ ಮೂಲಕ ಕುಲಸಚಿವ (ಪರೀಕ್ಷಾಂಗ) ಇವರಿಗೆ ಸಲ್ಲಿಸಲು ತಿಳಿಸಲಾಗಿದೆ.

ಕಡ್ಡಾಯವಾಗಿ ಆನ್‌ಲೈನ್‌ನಲ್ಲಿಯೇ ಅರ್ಜಿ ಸಲ್ಲಿಸುವುದು, ಹಾಗೂ ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ ಸಂಖ್ಯೆ 6361532058/7022254993 ಸಂಪರ್ಕಿಸುವುದು. (ಕೊನೆಯ ದಿನಾಂಕದವರೆಗೆ ಅರ್ಜಿ ಸಲ್ಲಿಸಲು ಕಾಯದೇ ಮುಂಚಿತವಾಗಿಯೇ ಅನ್‌ಲೈನ್‌ನಲ್ಲಿ ಸಲ್ಲಿಸುವುದರಿಂದ ಅಂತ್ಯದಲ್ಲಿ ಉಂಟಾಗುವ ಸರ್ವರ್ ದಟ್ಟಣೆಯ ಅಡಚಣೆ ತಪ್ಪಿಸಬಹುದಾಗಿದೆ.)

| ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ದಿನಾಂಕಗಳು: | | |
|---|---|---|
| 1 | **ದಂಡ ಶುಲ್ಕವಿಲ್ಲದೆ** | **27–07–2022 ರಿಂದ 06–08–2022 ರವರೆಗೆ** |
| 2 | **ದಂಡ ಶುಲ್ಕ ರೂ. 100/–ರಂತೆ (ಪ್ರತಿ ಸೆಮಿಸ್ಟರ್‌ಗೆ)** | **07–08–2022 ರಿಂದ 09–08–2022 ರವರೆಗೆ** |
| 3 | **ದಂಡ ಶುಲ್ಕ ರೂ. 500/–ರಂತೆ (ಪ್ರತಿ ಸೆಮಿಸ್ಟರ್‌ಗೆ)** | **10–08–2022 ಹಾಗೂ 11–08–2022** |

| ಬಿ.ಇಡಿ., ಪರೀಕ್ಷಾ ಶುಲ್ಕದ ವಿವರ | | |
|---|---|---|
| 1 | ಸೆಮಿಸ್ಟರ್ ಪೂರ್ಣ ಪರೀಕ್ಷೆಗೆ | ರೂ. 1800/– |
| 2 | ಪ್ರತಿ ಪತ್ರಿಕೆಗೆ ಥಿಯರಿ ಪರೀಕ್ಷೆ ಪ್ರತ್ಯೇಕವಾಗಿ (ಪ್ರತಿ ಸೆಮಿಸ್ಟರ್ ಎಲ್ಲಾ ಪತ್ರಿಕೆಗಳಿಗೆ ರೂ.1800/–ಕ್ಕೆ ಒಳಪಟ್ಟು) | ರೂ. 200/– |
| 3 | ಪ್ರಾಯೋಗಿಕ ಪರೀಕ್ಷೆಗೆ ಪ್ರತಿ ಪತ್ರಿಕೆಗೆ | ರೂ. 130/– |
| 4 | ಅಂಕಪಟ್ಟಿ ಶುಲ್ಕ (ಪ್ರತಿ ಸೆಮಿಸ್ಟರ್‌ಗೆ) | ರೂ. 220/– |
| 5 | ಕಿರುಪರೀಕ್ಷೆಯ ಪುಸ್ತಕ ಶುಲ್ಕ ಎಲ್ಲಾ ವಿದ್ಯಾರ್ಥಿಗಳಿಗೆ | ರೂ. 50/– |

ಪು.ತಿ.ನೋ

## ವಿದ್ಯಾರ್ಥಿಗಳಿಗೆ ಸೂಚನೆ:

1. ವಿದ್ಯಾರ್ಥಿಗಳು UUCMS ತಂತ್ರಾಂಶದ ಮೂಲಕ onlineನಲ್ಲಿ ಅರ್ಜಿ ಸಲ್ಲಿಸಲು ನೋಂದಣಿ ಸಂಖ್ಯೆ ನಮೂದಿಸಿ ಪರೀಕ್ಷೆ ತೆಗೆದುಕೊಳ್ಳುವ ಸೆಮಿಸ್ಟರ್‌ವಾರು/ವಿಷಯವಾರು ಗುರುತು ಮಾಡಿದ ನಂತರ ಶುಲ್ಕ ವಿವರಗಳುಳ್ಳ ಪರೀಕ್ಷಾ ಅರ್ಜಿಯನ್ನು ಮುದ್ರಿಸಿ ನೆಟ್ ಬ್ಯಾಂಕಿಂಗ್‌ನಲ್ಲಿ ಶುಲ್ಕ ಭರಿಸಿದ ನಂತರ ಪ್ರತಿಯನ್ನು ಕಾಲೇಜಿಗೆ ಸಲ್ಲಿಸಬೇಕು.

2. ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು ಯಾವುದೇ ATM (Debit) Card / Credit Card / Net Banking / Paytm wallet ಮೂಲಕ ನೇರವಾಗಿ ವಿದ್ಯಾರ್ಥಿಯು ತಮ್ಮ ಬ್ಯಾಂಕ್ ಖಾತೆಯಿಂದ ಹಣ ಪಾವತಿಸಿ ಸಂಬಂಧಿಸಿದ ಚಲನ್ ಪ್ರತಿ ಮತ್ತು ದಾಖಲಾತಿಗಳನ್ನು ಕಾಲೇಜಿಗೆ ಸಲ್ಲಿಸಬೇಕು. ನಿಗದಿಪಡಿಸಿದ ದಿನಾಂಕದ ನಂತರ ಸಲ್ಲಿಸಿದಲ್ಲಿ ಅಂತಹ ಅರ್ಜಿಗಳನ್ನು ಮಾನ್ಯ ಮಾಡಲಾಗುವುದಿಲ್ಲ.

**ವಿಶೇಷ ಸೂಚನೆ:** ವಿದ್ಯಾರ್ಥಿಗಳು **Internet Browsing centre**ನ ಮಾಲಿಕರ ಬ್ಯಾಂಕ್‌ಖಾತೆಯ ಮೂಲಕ ವಿಶ್ವವಿದ್ಯಾಲಯಕ್ಕೆ ಹಣ ಪಾವತಿಸಿದಲ್ಲಿ ಉಂಟಾಗುವ ತಾಂತ್ರಿಕ ತೊಂದರೆಗಳಿಗೆ ವಿದ್ಯಾರ್ಥಿಗಳೇ ಜವಾಬ್ದಾರರು.

ಅ. ರೂ. 2.5 ಲಕ್ಷಗಳ ಆದಾಯಕ್ಕಿಂತ ಮೇಲ್ಪಟ್ಟ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕ ಪಾವತಿಸಬೇಕು.

ಆ. **S.S.P. ಪೋರ್ಟಲ್ ಮುಖಾಂತರ ಸಮಾಜ ಕಲ್ಯಾಣ ಇಲಾಖೆಯಿಂದ ನೇರವಾಗಿ ಆಯಾ ವಿದ್ಯಾಥಿಗಳ ಬ್ಯಾಂಕ್ ಖಾತೆಗೆ ವಿದ್ಯಾರ್ಥಿ ವೇತನ ಜಮಾ ಮಾಡಲಾಗುತ್ತಿರುವುದರಿಂದ, ಪರಿಶಿಷ್ಟ ಜಾತಿ:ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು.** ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸದೇ ಇರುವ ವಿದ್ಯಾರ್ಥಿಗಳು / ವಿದ್ಯಾರ್ಥಿ ವೇತನ ಮಂಜೂರಾಗದ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕ ಪಾವತಿಸಬೇಕು.

ಪ್ರವರ್ಗ–1ಕ್ಕೆ 2.5ಲಕ್ಷ ಹಾಗೂ ರೂ. 1 ಲಕ್ಷ ಅಥವಾ ಇದಕ್ಕಿಂತ ಕಡಿಮೆ ಕುಟುಂಬದ ವಾರ್ಷಿಕ ಆದಾಯವನ್ನು ಹೊಂದಿರುವ 2ಎ, 2ಬಿ, 3ಎ, 3ಬಿ ಹಾಗೂ ಇತರೆ Freshers ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು. ಆದರೆ, ವಿದ್ಯಾರ್ಥಿಗಳ ಅರ್ಹತೆ ಮತ್ತು ಮೆರಿಟ್ ಆಧರಿಸಿ ಸರ್ಕಾರದ ಅನುದಾನದ ಲಭ್ಯತೆಗೆ ಒಳಪಟ್ಟು ಶುಲ್ಕ ಮರುಭರಿಕೆ ಮೊತ್ತವನ್ನು ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ಇಲಾಖೆಯಿಂದ ನೇರವಾಗಿ ಆಯಾ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಎನ್.ಇ.ಎಫ್.ಟಿ ವ್ಯವಸ್ಥೆ ಮೂಲಕ ಜಮಾ ಮಾಡಲಾಗುವುದೆಂದು ಸರ್ಕಾರದ ಆದೇಶ ಸಂಖ್ಯೆ: ಸ.ಕ.ಇ./201/ಬಿ.ಎಂ.ಎಸ್/2011 ಬೆಂಗಳೂರು ದಿನಾಂಕ: 23-06-2012ರಲ್ಲಿ ತಿಳಿಸಿರುತ್ತಾರೆ. ಶುಲ್ಕ ವಿನಾಯಿತಿ ಬಯಸುವ ಎಲ್ಲಾ ವಿದ್ಯಾರ್ಥಿಗಳು ಸಕ್ಷಮ ಅಧಿಕಾರಿಗಳಿಂದ ಪಡೆದ ಆದಾಯ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಕಾಲೇಜಿಗೆ ಒಪ್ಪಿಸಬೇಕು.

3. **ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳೂ ಕೂಡಾ ನಿಗದಿತ ಸಮಯದಲ್ಲಿ ಪರೀಕ್ಷಾ ಶುಲ್ಕ ಪಾವತಿಸಬೇಕು.**
4. **ಪರೀಕ್ಷೆಗೆ ವಿದ್ಯಾರ್ಥಿಗಳು ಪಾವತಿಸುವ ಶುಲ್ಕವನ್ನು ಯಾವುದೇ ಕಾರಣಕ್ಕಾಗಿ ಹಿಂದಿರುಗಿಸಲಾಗುವುದಿಲ್ಲ.**

## ಪ್ರಾಚಾರ್ಯರಿಗೆ ಸೂಚನೆಗಳು

1. ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಿ ಸಲ್ಲಿಸಿದ ಚಲನ್‌ನ್ನು ಪರಿಶೀಲಿಸಿ ಕೊನೆ ದಿನಾಂಕದಿಂದ ಎರಡು ದಿನದೊಳಗಾಗಿ ಪ್ರಾಂಶುಪಾಲರ ಮೇಲುಸಹಿಯೊಂದಿಗೆ ಚಲನ್ ಪ್ರತಿ ಹಾಗೂ ಇತರೆ ದಾಖಲೆಗಳೊಂದಿಗೆ ವಿಶ್ವವಿದ್ಯಾಲಯಕ್ಕೆ ಸಲ್ಲಿಸಬೇಕು. ನಂತರ ಕಳುಹಿಸುವ ಅರ್ಜಿಗಳನ್ನು ಮಾನ್ಯಮಾಡುವುದಿಲ್ಲ.

2. **ಕುಲಸಚಿವ(ಆಡಳಿತ)/ಶೈಕ್ಷಣಿಕ ವಿಭಾಗದಿಂದ ಪ್ರವೇಶಾತಿ ಅನುಮೋದನೆಯಾಗದೇ ಹಾಗೂ ಕಡಿಮೆ ಹಾಜರಾತಿ ಇರುವ ವಿದ್ಯಾರ್ಥಿಗಳು ಪರೀಕ್ಷೆಗೆ ಅರ್ಜಿಗಳನ್ನು ಸಲ್ಲಿಸಲು ಅನರ್ಹರಾಗಿರುತ್ತಾರೆ.** ಪ್ರವೇಶಾವಕಾಶವು ಅಮಾನ್ಯವಾಗಿರುವ ಅಥವಾ ವಿಶ್ವವಿದ್ಯಾಲಯದಿಂದ ಪ್ರವೇಶವು ಅನುಮೋದಿತವಾಗಿಲ್ಲದ ಅಥವಾ ನಿರ್ದಿಷ್ಟ ಪಡಿಸಲಾದ ವಿದ್ಯಾರ್ಥಿಗಳ ಸಂಖ್ಯೆಗಿಂತ ಹೆಚ್ಚುವರಿಯಾಗಿ ಕಾಲೇಜಿಗೆ ಅಥವಾ ವ್ಯಾಸಂಗಕ್ಕೆ ಪ್ರವೇಶ ಪಡೆದಿರುವ ಯಾವೊಬ್ಬ ವಿದ್ಯಾರ್ಥಿಯೂ, ಕಾಲೇಜು ಅಥವಾ ವಿಶ್ವವಿದ್ಯಾಲಯವು ನಡೆಸುವ ಪರೀಕ್ಷೆಗೆ ಹಾಜರಾಗಲು ಅರ್ಹರಾಗಿರುವುದಿಲ್ಲ. ಅಲ್ಲದೆ ಆಯಾ ಕೋರ್ಸಿನ ನಿಯಮದ ಪ್ರಕಾರ ಪರೀಕ್ಷೆ ತೆಗೆದುಕೊಳ್ಳಲು ಅರ್ಹರಲ್ಲದ ವಿದ್ಯಾರ್ಥಿಗಳು ಅರ್ಜಿಗಳನ್ನು ಸಲ್ಲಿಸುವಂತಿಲ್ಲ.

3. ಹಾಜರಾತಿ ಕೊರತೆ ಇರುವಂತಹ ಹಾಗೂ ಪ್ರವೇಶಾನುಮೋದನೆಯಾಗದೆ ವಿದ್ಯಾರ್ಥಿಗಳ ಪಟ್ಟಿಯನ್ನು ಪರೀಕ್ಷೆಗಳು ಆರಂಭವಾಗುವ 15ದಿನ ಮುಂಚಿತವಾಗಿ ವಿಶ್ವವಿದ್ಯಾಲಯಕ್ಕೆ ತಪ್ಪದೇ ಸಲ್ಲಿಸುವುದು. ಒಂದು ವೇಳೆ ಹಾಜರಾತಿ ಕೊರತೆ ಹಾಗೂ ಪ್ರವೇಶಾನುಮೋದನೆಯಾಗದೇ ಇರುವ ವಿದ್ಯಾರ್ಥಿಗಳು ಮುಂದಿನ ಸೆಮಿಸ್ಟರ್‌ಗೆ ಅರ್ಹತೆಯಿಲ್ಲದೆ ಪರೀಕ್ಷಾ ಅರ್ಜಿ ಸಲ್ಲಿಸಿದ್ದಲ್ಲಿ/ಪರೀಕ್ಷೆ ತೆಗೆದುಕೊಂಡಲ್ಲಿ ಮುಂದಿನ ಎಲ್ಲಾ ತರಹದ ತೊಂದರೆಗಳಿಗೆ ಕಾಲೇಜಿನ ಪ್ರಾಂಶುಪಾಲರೆ ನೇರ ಜವಾಬ್ದಾರರಾಗಿರುತ್ತಾರೆ.

4. S.S.P. ಪೋರ್ಟಲ್ ಮುಖಾಂತರ ಸಮಾಜ ಕಲ್ಯಾಣ ಇಲಾಖೆಯಿಂದ ನೇರವಾಗಿ ಆಯಾ ವಿದ್ಯಾಥಿಗಳ ಬ್ಯಾಂಕ್ ಖಾತೆಗೆ ವಿದ್ಯಾರ್ಥಿ ವೇತನ ಜಮಾ ಮಾಡಲಾಗುತ್ತಿರುವುದರಿಂದ, ಪರಿಶಿಷ್ಟ ಜಾತಿ:ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು.

5. **ಪ್ರವರ್ಗ-1ಕ್ಕೆ 2.5ಲಕ್ಷ ಹಾಗೂ ರೂ. 1ಲಕ್ಷ ಅಥವಾ ಇದಕ್ಕಿಂತ ಕಡಿಮೆ ಕುಟುಂಬದ ವಾರ್ಷಿಕ ಆದಾಯವನ್ನು ಹೊಂದಿರುವ 2ಎ, 2ಬಿ, 3ಎ, 3ಬಿ ಹಾಗೂ ಇತರೆ Freshers ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು. ಆದರೆ, ವಿದ್ಯಾರ್ಥಿಗಳ ಅರ್ಹತೆ ಮತ್ತು ಮೆರಿಟ್ ಆಧರಿಸಿ ಸರ್ಕಾರದ ಅನುದಾನದ ಲಭ್ಯತೆಗೆ ಒಳಪಟ್ಟು ಶುಲ್ಕ ಮರುಭರಿಕೆ ಮೊತ್ತವನ್ನು ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ಇಲಾಖೆಯಿಂದ ನೇರವಾಗಿ ಆಯಾ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಎನ್.ಇ.ಎಫ್.ಟಿ ವ್ಯವಸ್ಥೆ ಮೂಲಕ ಜಮಾ ಮಾಡಲಾಗುವುದೆಂದು ಸರ್ಕಾರದ ಆದೇಶ ಸಂಖ್ಯೆ: ಸ.ಕ.ಇ./201/ಬಿ.ಎಂ.ಎಸ್.2011 ಬೆಂಗಳೂರು ದಿನಾಂಕ: 23-06-2012ರಲ್ಲಿ ತಿಳಿಸಿರುತ್ತಾರೆ.**

6. **ಪ್ರಾಯೋಗಿಕ ಪರೀಕ್ಷೆಗೆ ಅಗತ್ಯವಾದ ಉತ್ತರ ಪತ್ರಿಕೆ / ಲೇಖನ ಸಾಮಗ್ರಿ ಹಾಗೂ ಮುದ್ರಿತ ನಮೂನೆಗಳಿಗೆ ಬೇಡಿಕೆಪಟ್ಟಿಗಳನ್ನು ದಿನಾಂಕ: 30-07-2022ರೊಳಗಾಗಿ ತಲುಪಿಸಲು ಸೂಚಿಸಿದೆ.**

7. **ಸೈದ್ಧಾಂತಿಕ ಪರೀಕ್ಷೆ ನಡೆಸಲು ಬೇಕಾದ ಉತ್ತರ ಪತ್ರಿಕೆ ಮುದ್ರಿತ ನಮೂನೆಗಳು ಹಾಗೂ ಲೇಖನ ಸಾಮಾಗ್ರಿಗಳ ಬೇಡಿಕೆ ಪಟ್ಟಿಗಳನ್ನು ದಿನಾಂಕ: 06-08-2022ರೊಳಗಾಗಿ ಶ್ರೀ ಸುಬ್ರಮಣ್ಯ ಹೆಚ್. ಎನ್., ಶಾಖಾಧಿಕಾರಿಗಳು, ಲೆಕ್ಕ ಶಾಖೆ, ಪರೀಕ್ಷಾ ವಿಭಾಗ ಇವರಿಗೆ ತಲುಪಿಸಲು ಸೂಚಿಸಿದೆ. (ಹೆಚ್ಚಿನ ಮಾಹಿತಿಗೆ 6361529618 ಸಂಪರ್ಕಿಸಬಹುದು.)**

8. **ಪ್ರಶ್ನೆ ಪತ್ರಿಕೆಗಳ ಬೇಡಿಕೆ ಪಟ್ಟಿಯನ್ನು ದಿನಾಂಕ:08-08-2022ರೊಳಗೆ ಸಲ್ಲಿಸುವುದು. ಸದರಿ ಪ್ರಶ್ನೆಪತ್ರಿಕೆ ಬೇಡಿಕೆ ಪಟ್ಟಿಯನ್ನು ಪರಿಶೀಲಿಸಿ, ದಿನಾಂಕ: 10-08-2022ರೊಳಗೆ ಸರಿ ಇದೆಯೆ ಅಥವಾ ಇಲ್ಲವೇ ಎಂಬುದರ ಬಗ್ಗೆ ಶ್ರೀ ಸಿದ್ಧಲಿಂಗ ಜಿ. ಪಾಟೀಲ್, ಶಾಖಾಧಿಕಾರಿಗಳು, ದೂರವಾಣಿ ಸಂಖ್ಯೆ: 94818 77505, (ಪರೀಕ್ಷಾಂಗ), ರಹಸ್ಯ ವಿಭಾಗ, ಇವರಿಗೆ ತಿಳಿಸಲು ಸೂಚಿಸಿದೆ.**

9. ವಿಶ್ವವಿದ್ಯಾಲಯವು ಆಂತರಿಕ ಕಿರುಪರೀಕ್ಷೆಯ ಉತ್ತರ ಪತ್ರಿಕೆ (ಬ್ಲೂ ಬುಕ್)ಗಳನ್ನು ಹಿಂಪಡೆಯುವುದರಿಂದ ಸೈದ್ಧಾಂತಿಕ ಪರೀಕ್ಷೆ ಪ್ರಾರಂಭಕ್ಕೆ ಮುಂಚೆ ಆಂತರಿಕ ಅಂಕಗಳಿಗೆ ಸಂಬಂಧಿಸಿದಂತೆ ಯಾವುದೇ ತೊಂದರೆಗಳಿದ್ದಲ್ಲಿ ಅದನ್ನು ಬಗೆಹರಿಸಿಕೊಳ್ಳಬೇಕು. ತದನಂತರ ಬರುವಂತಹ ಆಂತರಿಕ ಅಂಕಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ. **(ಹೆಚ್ಚಿನ ಮಾಹಿತಿಗೆ 7022255745 ಸಂಪರ್ಕಿಸಬಹುದು.)**

10. ಆಂತರಿಕ ಪರೀಕ್ಷೆಗಳ ಉತ್ತರ ಪತ್ರಿಕೆಗಳನ್ನು ತಮ್ಮ ಕಾಲೇಜಿನಲ್ಲಿಯೇ ಆರು ತಿಂಗಳಕಾಲ ಸಂರಕ್ಷಿಸಿಟ್ಟುಕೊಂಡು ನಂತರ ವಿಶ್ವವಿದ್ಯಾಲಯಕ್ಕೆ ಕಳುಹಿಸಿಕೊಡುವುದು.

11. ಯಾವುದೇ ವಿದ್ಯಾರ್ಥಿಯ ಆಂತರಿಕ ಅಂಕಗಳನ್ನು ಆನ್‌ಲೈನ್‌ನಲ್ಲಿ ನಮೂದಿಸದೇ ಬಿಟ್ಟುಹೋದಲ್ಲಿ (Monitoring committeeಯಲ್ಲಿ ಪರಿಶೀಲಿಸಿ Freeze ಮಾಡಿದ ನಂತರ) ಯಾವುದೇ ಕಾರಣಕ್ಕೂ ಹಾರ್ಡ್‌ಕಾಪಿಯನ್ನು ನಂತರ ಕಾಲೇಜಿನಿಂದ ಕಳುಹಿಸಿಕೊಟ್ಟಲ್ಲಿ ಅದನ್ನು ಪರಿಗಣಿಸಲಾಗುವುದಿಲ್ಲ ಅಂತಹ ಮನವಿಗಳನ್ನು ತಿರಸ್ಕರಿಸಲಾಗುವುದು. (**ಹೆಚ್ಚಿನ ಮಾಹಿತಿಗೆ 7022255745 ಸಂಪರ್ಕಿಸಬಹುದು.**)

26/7/22

ಕುಲಸಚಿವರು(ಪರೀಕ್ಷಾಂಗ)

ಕುಲಸಚಿವ (ಪರೀಕ್ಷಾಂಗ)
ಕುವೆಂಪು ವಿಶ್ವವಿದ್ಯಾನಿಲಯ,
ಜ್ಞಾನಸಹ್ಯಾದ್ರಿ,
ಶಂಕರಘಟ್ಟ 577 451.

ಗೆ,

ಶಿವಮೊಗ್ಗ/ಚಿಕ್ಕಮಗಳೂರು ಜಿಲ್ಲೆಗಳ ಕುವೆಂಪು ವಿಶ್ವವಿದ್ಯಾಲಯದ ವ್ಯಾಪ್ತಿಗೆ ಒಳಪಡುವ ಸಂಯೋಜಿತ ಬಿ.ಇಡಿ. ಕಾಲೇಜುಗಳ ಪ್ರಾಂಶುಪಾಲರುಗಳಿಗೆ,

**ಪ್ರತಿಗಳು:**

1. ಆಪ್ತಶಾಖೆ, ಮಾನ್ಯ ಕುಲಪತಿ, ಕುಲಸಚಿವ(ಆಡಳಿತ), ಕುಲಸಚಿವ (ಪರೀಕ್ಷಾಂಗ) , ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
2. ನಿರ್ದೇಶಕರು, ಪಿ.ಎಂ.ಇ ಮಂಡಳಿ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
3. ಸರ್ಕಾರಿ ಲೆಕ್ಕಪರಿಶೋಧಕರು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
4. ಉಪಕುಲಸಚಿವರು: ಸಹಾಯಕ ಕುಲಸಚಿವರು, ಪರೀಕ್ಷಾಂಗ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
5. ಶಾಖಾಧಿಕಾರಿಗಳು, ಲೆಕ್ಕ ಶಾಖೆ / ಸ್ನಾತಕೋತ್ತರ ಪರೀಕ್ಷಾ ವಿಭಾಗ, / ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
6. ಕಂಪ್ಯೂಟರ್ ಪ್ರೋಗ್ರಾಮರ್, ಪರೀಕ್ಷಾ ಕಂಪ್ಯೂಟರ್ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ - ಸದರಿ ಪ್ರಕಟಣೆಯನ್ನು ವಿಶ್ವವಿದ್ಯಾಲಯದ ವೆಬ್‌ಸೈಟ್‌ನಲ್ಲಿ ತುರ್ತಾಗಿ ಪ್ರಕಟಿಸಲು ಸೂಚಿಸಿದೆ.
7. ನಿರ್ದೇಶಕರು, UCCF ಕಛೇರಿ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
8. ವ್ಯವಸ್ಥಾಪಕರು, ಮೆ: ಲಾಜಿಸಿಸ್ @ ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
9. ಕಛೇರಿ ಪ್ರತಿ.